57.

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1213 (1414) |
| ಸದಸ್ಯರ ಹೆಸರು | ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | 18.12.2025 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ/ |
|---|---|---|
| ಅ | ಕರ್ನಾಟಕ ಲೋಕಸೇವಾ ಆಯೋಗವು ಪ್ರಶ್ನೆ ಪತ್ರಿಕೆ ಲೋಪದೋಷ, ಫಲಿತಾಂಶ ವಿಳಂಬ ಸೇರಿ ನಾನಾ ಕಾರಣಗಳಿಂದಾಗಿ ನೇಮಕಾತಿ ಪ್ರಕ್ರಿಯೆಗಳನ್ನು ವಿಳಂಬವಾದ್ದರಿಂದ ಇನ್ನು ಮುಂದೆ ಕೆ.ಎ.ಎಸ್. ಗೆಜೆಟೆಡ್ ಪ್ರೊಬೇಷನರ್ಸ್ ಪರೀಕ್ಷೆಯನ್ನು ನಡೆಸುವ ಜವಾಬ್ದಾರಿಯನ್ನು ಕೇಂದ್ರ ಲೋಕಸೇವಾ ಆಯೋಗಕ್ಕೆ ವಹಿಸುವ ಆಲೋಚನೆ ಇದೆಯೇ; | ಇಲ್ಲ. |
| ಆ | ಆಯೋಗವು ಕಳೆದ ಎರಡು ವರ್ಷಗಳಲ್ಲಿ ಒಟ್ಟು ಎಷ್ಟು ನೇಮಕಾತಿ ಅಧಿಸೂಚನೆಗಳನ್ನು ಹೊರಡಿಸಿದೆ; ಇವುಗಳಲ್ಲಿ ಅಂತಿಮ ಆಯ್ಕೆ ಪಟ್ಟಿ ಸಮೇತ ಫಲಿತಾಂಶಗಳನ್ನು ಪ್ರಕಟಿಸುವ ಮೂಲಕ ಎಷ್ಟು ನೇಮಕಾತಿಗಳನ್ನು ಪೂರ್ಣಗೊಳಿಸಿದೆ; | ಕರ್ನಾಟಕ ಲೋಕಸೇವಾ ಆಯೋಗವು ಕಳೆದ ಎರಡು ವರ್ಷಗಳಲ್ಲಿ ಹೊರಡಿಸಿರುವ ನೇಮಕಾತಿ ಅಧಿಸೂಚನೆಗಳ ಸಂಖ್ಯೆ:29.<br>ಸದರಿ ನೇಮಕಾತಿ ಅಧಿಸೂಚನೆಗಳಲ್ಲಿ ಅಂತಿಮ ಆಯ್ಕೆ ಪಟ್ಟಿ ಸಮೇತ ಫಲಿತಾಂಶಗಳನ್ನು ಪ್ರಕಟಿಸುವ ಮೂಲಕ ಪೂರ್ಣಗೊಳಿಸಿರುವ ನೇಮಕಾತಿಗಳ ಸಂಖ್ಯೆ:07. |
| ಇ | ಆಯೋಗವು (ನ್ಯಾಯಾಲಯದ ಪ್ರಕರಣಗಳನ್ನು ಹೊರತುಪಡಿಸಿ) ವಿವಿಧ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮಾದರಿಯಲ್ಲಿ ತ್ವರಿತಗತಿಯಲ್ಲಿ ಪೂರ್ಣಗೊಳಿಸದಿರಲು ಕಾರಣವೇನು; (ವಿವರ ನೀಡುವುದು) | ಕರ್ನಾಟಕ ಲೋಕಸೇವಾ ಆಯೋಗವು ಒಂದು ಸಂವಿಧಾನಾತ್ಮಕ ಸಂಸ್ಥೆಯಾಗಿದ್ದು, ಸರ್ಕಾರದ ವಿವಿಧ ಇಲಾಖೆಗಳಿಂದ ನೇರ ನೇಮಕಾತಿಗಾಗಿ ಸ್ವೀಕೃತವಾಗುವ ಪ್ರಸ್ತಾವನೆಯಂತೆ ರಾಜ್ಯದ ನಾಗರೀಕ ಸೇವೆಯಲ್ಲಿನ ಗ್ರೂಪ್ 'ಎ', 'ಬಿ' ಮತ್ತು 'ಸಿ' ವೃಂದದ ಹುದ್ದೆಗಳಿಗೆ ನೇಮಕಾತಿ ನಡೆಸುವ ಆಯ್ಕೆ ಪ್ರಾಧಿಕಾರವಾಗಿರುತ್ತದೆ ಹಾಗೂ ಇದಲ್ಲದೆ ರಾಜ್ಯದ ನಾಗರೀಕ ಸೇವೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸೇವಾನಿರತ ಖಾಯಂ ನೌಕರರಿಗೆ ಇಲಾಖಾ ಪರೀಕ್ಷೆಗಳನ್ನು ನಡೆಸುವ ಕಾರ್ಯವನ್ನು ನಿರ್ವಹಿಸುತ್ತಿದೆ.<br>ಆಯೋಗವು ನಡೆಸುವ ಹೆಚ್ಚಿನ ನೇಮಕಾತಿಗಳನ್ನು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸುವ ಮೂಲಕ ಆಯ್ಕೆ ಪ್ರಕ್ರಿಯೆಯನ್ನು ಕೈಗೊಳ್ಳುತ್ತದೆ. ಆಯೋಗವು ಆಹ್ವಾನಿಸುವ ಹುದ್ದೆಗಳ ನೇಮಕಾತಿಗಾಗಿ ಲಕ್ಷಾಂತರ ಅಭ್ಯರ್ಥಿಗಳು ಅರ್ಜಿ ಸಲ್ಲಿಸುತ್ತಾರೆ. ಈ ಎಲ್ಲಾ ಅಭ್ಯರ್ಥಿಗಳಿಗೂ ಏಕಕಾಲದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಬೇಕಾಗಿರುತ್ತದೆ. ಆದ್ದರಿಂದ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲದೇ ಕೆಲವೊಮ್ಮೆ ತಾಲ್ಲೂಕು ಕೇಂದ್ರಗಳಲ್ಲೂ ಸಹ ಪರೀಕ್ಷೆಗಳನ್ನು ನಡೆಸುವ ಅನಿವಾರ್ಯತೆ ಇರುತ್ತದೆ.<br>ಸರ್ಕಾರವು ಕಾಲಕಾಲಕ್ಕೆ ತೆಗೆದುಕೊಳ್ಳುವ ತೀರ್ಮಾನಗಳು, ಜಾರಿಗೊಳಿಸುವ ಆದೇಶಗಳು, ನ್ಯಾಯಾಲಯಗಳು ಮತ್ತು |
| ಈ | ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಎಲ್ಲ ಸ್ಪರ್ಧಾತ್ಮಕ ಪರೀಕ್ಷೆ ಪ್ರಕ್ರಿಯೆಗಳನ್ನು ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸಲು ಸಾಧ್ಯವಾಗುವುದಾದರೆ, ಕರ್ನಾಟಕ ಲೋಕಸೇವಾ ಆಯೋಗದಿಂದ ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸಲು ಯಾಕೆ ಸಾಧ್ಯವಿಲ್ಲ; ನಿಗದಿತ ಕಾಲಮಿತಿಯಲ್ಲಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಆಯೋಗವು ಕೈಗೊಳ್ಳಬಹುದಾದ ಕ್ರಮಗಳೇನು? | |

| | | |
|---|---|---|
| | | ತೀರ್ಪುಗಳು/ಆದೇಶಗಳು ಹಾಗೂ ವಿವಿಧ ಇಲಾಖೆಗಳ/ ನೇಮಕಾತಿ ಪ್ರಾಧಿಕಾರಗಳ ನಿರ್ಧಾರಗಳು/ ಸ್ಪಷ್ಟೀಕರಣಗಳು ನೇಮಕಾತಿ ಪ್ರಕ್ರಿಯೆಯ ವಿಳಂಬತೆಗೆ ಕಾರಣವಾಗುತ್ತಿದೆ.<br>ಆಯೋಗದಲ್ಲಿ ವಿವಿಧ ನೇಮಕಾತಿಗಳ ಆಯ್ಕೆ ಪ್ರಕ್ರಿಯೆಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ :-<br>1. ಆಯೋಗಕ್ಕೆ ಸ್ವೀಕೃತವಾಗುವ ಹೊಸ ಹುದ್ದೆಗಳ ನೇಮಕಾತಿಗಾಗಿ ಪ್ರಸ್ತಾವನೆಯನ್ನು Centre for Smart Governance ರವರ ಸಹಕಾರದಿಂದ ಅಭಿವೃದ್ಧಿಪಡಿಸಿರುವ KPSC Udyog ತಂತ್ರಾಂಶದ ಮುಖಾಂತರ ಆನ್‌ಲೈನ್‌ನಲ್ಲಿ ಅರ್ಜಿ ಸ್ವೀಕರಿಸಲಾಗುತ್ತಿದೆ.<br>2. ದಿನಾಂಕ:17-01-2025ರ ಸುತ್ತೋಲೆ ಸಂಖ್ಯೆ: ಸಿಆಸುಇ 191 ಎಸ್‌ಎಲ್‌ಎ 2024 (ಭಾಗ-1) ರನ್ವಯ ಸರ್ಕಾರದ ವಿವಿಧ ನೇಮಕಾತಿ ಪ್ರಕ್ರಿಯೆಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಅನುವಾಗುವಂತೆ ನೇಮಕಾತಿ ಪ್ರಾಧಿಕಾರಗಳು ಹಾಗೂ ಆಯ್ಕೆ ಪ್ರಾಧಿಕಾರಗಳು ಅನುಸರಿಸಬೇಕಾದ ವಾರ್ಷಿಕ ವೇಳಾಪಟ್ಟಿಯನ್ನು ನಿಗದಿಪಡಿಸಿ ಸೂಚನೆಗಳನ್ನು ನೀಡಲಾಗಿದೆ.<br>3. ಮೌಲ್ಯಮಾಪನ ಕಾರ್ಯವನ್ನು ಶೀಘ್ರವಾಗಿ ಪೂರ್ಣಗೊಳಿಸಲು ಡಿಜಿಟಲ್ ಮೌಲ್ಯಮಾಪನ ಪದ್ಧತಿಯನ್ನು ಅಳವಡಿಸಿಕೊಳ್ಳಲಾಗಿದೆ.<br>4. ವಿವಿಧ ಇಲಾಖೆಗಳ ಆಯ್ಕೆ ಪ್ರಾಧಿಕಾರಗಳು/ಕರ್ನಾಟಕ ಪರೀಕ್ಷಾ ಪ್ರಾಧಿಕಾರ/ವಿಶ್ವ ಕೇಂದ್ರ ವಿದ್ಯಾಲಯಗಳು/ಮಂಡಳಿಗಳಲ್ಲದೆ ಕೇಂದ್ರ ಲೋಕಸೇವಾ ಆಯೋಗ/SSC/NTAಗಳು ನಡೆಸುವ ಪರೀಕ್ಷೆಗಳ ದಿನಾಂಕಗಳು ಘರ್ಷಣೆಯಾಗದಂತೆ ಪರೀಕ್ಷೆ ದಿನಾಂಕಗಳನ್ನು ನಿಗದಿಪಡಿಸಲಾಗುತ್ತಿದೆ.<br>5. ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆ/ ಸಂದರ್ಶನ ಕಾರ್ಯವನ್ನು ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ.<br>6. ವಿಳಂಬವನ್ನು ತಡೆಗಟ್ಟಲು ನೇಮಕಾತಿಯ ವಿವಿಧ ಹಂತಗಳಲ್ಲಿ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಲು ಪರಿಶೀಲಿಸಲಾಗುತ್ತಿದೆ. ಉದಾ:CBT (Computer Based Test)/CBRT (Computer Based Recruitment Test) ಪರೀಕ್ಷೆಗಳನ್ನು ನಡೆಸಲು ಚಿಂತನ ನಡೆಸಲಾಗುತ್ತಿದೆ. |

**ಸಂಖ್ಯೆ: ಸಿಆಸುಇ 172 ಎಸ್‌ಎಸ್‌ಸಿ 2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ